**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ, ಕನಕಪುರ**

**ಸಿ ಸಿ ನಂ:1035/2018**

**:: ಆಪಾದನೆ ::**

**ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್. ಎಲ್ಎಲ್.ಎಮ್., ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ, ಕನಕಪುರ ಆದ ನಾನು**

ನಾಗೇಶ್ ಪಿ
ಬಿನ್ ಲೇಟ್ ಪುಟ್ಟಸ್ವಾಮಯ್ಯ
ವಯಸ್ಸು 31 ವರ್ಷಗಳು
ವಾಸಃ ಚಿಕ್ಕಭೈರಮಂಗಲ ಗ್ರಾಮ
ಬಿಡದಿ ಹೋಬಳಿ
ರಾಮನಗರ ತಾಲ್ಲೂಕು

**ಎಂಬ ಆರೋಪಿತರಾದ ನಿಮ್ಮ ಮೇಲೆ ಈ ಕೆಳಗಿನಂತೆ ಹೊರಿಸುವ ಆಪಾದನೆ ಏನೆಂದರೆ ಃ-**

ದಿನಾಂಕ ಃ09.08.2018ರಂದು ಬೆಳಿಗ್ಗೆ ಸುಮಾರು 7ಃ15 ಗಂಟೆ ಸಮಯದಲ್ಲಿ ಹಾರೋಹಳ್ಳಿ ಪೋಲಿಸ್ ಠಾಣೆ ವ್ಯಾಪ್ತಿಯ ಹಾರೋಹಳ್ಳಿ-ಮರಳವಾಡಿ ರಸ್ತೆಯ ಗಾಂಧಿ ಫಾರಂ ಗೇಟ್‌ನ ನಾಲ್ಕು ರಸ್ತೆಗಳು ಸೇರುವ ವೃತ್ತದ ಬಳಿ ಆರೋಪಿಯಾದ ನೀವು ಕೆಎ-42-ಎ-7995 ರ ಶಾಲಾ ಬಸ್ಸನ್ನು ಹಾರೋಹಳ್ಳಿ ಕಡೆಯಿಂದ ಮರಳವಾಡಿ ಕಡೆಗೆ ಅತಿವೇಗ ಮತ್ತು ಅಜಾಗರೂಕತೆಯಿಂದ ಮಾನವ ಜೀವಕ್ಕೆ ಹಾನಿಯಾಗುವಂತೆ ಅಥವಾ ಯಾವುದೇ ವ್ಯಕ್ತಿಗೆ ಗಾಯ ಅಥವಾ ತೊಂದರೆಯಾಗುವಂತೆ ಚಲಾಯಿಸುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ.279 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಮೇಲ್ಕಂಡ ದಿನಾಂಕ ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ನಿಮ್ಮ ವಾಹನವನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿ ಕೆಎ-01-ಹೆಚ್.ಡಬ್ಲ್ಯು-8069 ರ ಮೋಟಾರ್ ಸೈಕಲ್‌ಗೆ ಡಿಕ್ಕಿ ಪಡಿಸಿ, ಅದರ ಸವಾರ ನಂದೀಶ್ ರವರಿಗೆ ತೀವ್ರ ಸ್ವರೂಪದ ಗಾಯಪಡಿಸಿ ಅವರ

ಮಾನವ ಹತ್ಯೆ ಅಲ್ಲದ ಮರಣವನ್ನುಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ.304-ಎ ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

**ಪ್ರಶ್ನೆಃ ನಿಮ್ಮ ಮೇಲೆ ಹೊರಿಸಲಾದ ಆಪಾದನೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?**

**ಉತ್ತರಃ-** ಹೌದು

**ಪ್ರಶ್ನೆಃ ನೀವು ಸದರಿ ಆಪಾದನೆಯನ್ನು ಒಪ್ಪಿಕೊಳ್ಳುತ್ತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?**

**ಉತ್ತರಃ-** ವಿಚಾರಣೆಯಾಗಬೇಕು

**(**ಮೇಲಿನ ಆಪಾದನೆಯನ್ನು ಆಪಾದಿತನಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಆ ವರು ನೀಡಿದ ಉತ್ತರವನ್ನು ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.**)**

**ದಿಃ13.03.2020**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆಎಂಎಫ್‌ಸಿ, ಕನಕಪುರ.**